## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : **2016-17ನೇ** ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಮತ್ತು ಗೊಬ್ಬರ ನಿರ್ವಹಣೆ ಕಾರ್ಯಕ್ರಮ (NBMMP)ದ ಅನುಷ್ಠಾನವನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸುವ ಕುರಿತಂತೆ ಹೊರಡಿಸಿದ ಆದೇಶವನ್ನು ರದ್ದುಗೊಳಿಸುವ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 91 ಜೈಅಯೋ 2016, ದಿನಾಂಕ 09.11.2016.
2. MoRD ನವ ದೆಹಲಿ ರವರ ಇ-ಮೇಲ್ ದಿನಾಂಕ 22.02.2017.
3. ದಿನಾಂಕ 17.05.2016ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಗ್ರಾಮೀಣ ಇಂಧನ ಕಾರ್ಯಕ್ರಮದ ಪರಿಶೀಲನಾ ಸಭೆಯ ನಡವಳಿ.
4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪಂ ಇಲಾಖೆರವರ ಪತ್ರ ಸಂಖ್ಯೆ ಗ್ರಾಅಪ 841 ಉಖಾಯೋ 2014, ದಿನಾಂಕ 17.10.2016.

### ಪ್ರಸ್ತಾವನೆ

ರಾಷ್ಟ್ರೀಯ ಜೈವಾನಿಲ ಮತ್ತು ಗೊಬ್ಬರ ನಿರ್ವಹಣೆ ಕಾರ್ಯಕ್ರಮವು (NBMMP) ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ರಾಜ್ಯದಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕಾರ್ಯಕ್ರಮದ ಅನುಷ್ಠಾನದ ಹಿತದೃಷ್ಟಿಯಿಂದ ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ NBMMPಯನ್ನು MGNREGA Convergence ಮೂಲಕ ಅನುಷ್ಠಾನಗೊಳಿಸಲು ಆದೇಶಿಸಿದೆ. ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ನವ ದೆಹಲಿ ರವರು ಓದಲಾದ (2)ರ ಪತ್ರದಲ್ಲಿ MGNREGA ರಡಿ ಜೈವಾನಿಲ ಘಟಕಗಳನ್ನು ನಿರ್ಮಿಸಲು ಅವಕಾಶವಿಲ್ಲ ಎಂದು ತಿಳಿಸಿದೆ. ಈ ಹಿನ್ನೆಲೆಯಲ್ಲಿ ಮೇಲೆ ಓದಲಾದ (1)ರ ಆದೇಶವನ್ನು ರದ್ದುಪಡಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 91 ಜೈಅಯೋ 2016, ಬೆಂಗಳೂರು ದಿನಾಂಕ 27.02.2017.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ ಮೇಲೆ (2)ರ ಪತ್ರದಲ್ಲಿ MGNREGA ರಡಿ ಜೈವಾನಿಲ ಘಟಕಗಳನ್ನು ಅಳವಡಿಸಲು ಅವಕಾಶವಿಲ್ಲವೆಂದು ತಿಳಿಸಿರುವ ಹಿನ್ನೆಲೆಯಲ್ಲಿ 2016-17ನೇ ಸಾಲಿಗೆ ಸಂಬಂಧಿಸಿದಂತೆ 3 ಘನ ಮೀಟರ್ ಸಾಮರ್ಥ್ಯದ ಧೀನಬಂಧು ಮಾದರಿಯ ಜೈವಾನಿಲ ಘಟಕವನ್ನು NBMMP ಮತ್ತು MGNREGA ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸುವ ಕುರಿತಂತೆ ಮೇಲೆ ಓದಲಾದ (1)ರ ಆದೇಶವನ್ನು ರದ್ದುಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ :
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪ ಕಾರ್ಯದರ್ಶಿ (ಅಭಿವೃದ್ಧಿ)/ಯೋಜನಾ ನಿರ್ದೇಶಕರು / ಮುಖ್ಯ ಲೆಕ್ಕಾಧಿಕಾರಿಗಳು.
5. ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು.
6. ವಿಶೇಷ ಅಧಿಕಾರಿ, ಗಣಕ ಕೋಶ, ಗ್ರಾಅಪಂ ಇಲಾಖೆ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)ರವರ ಆಪ್ತ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಂತರಿಕ ಆರ್ಥಿಕ ಸಲಹೆಗಾರರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ.